ಕರ್ನಾಟಕ ವಿಧಾನಸಭೆ

ಶುಕ್ರವಾರ 25ನೇ ನವೆಂಬರ್ 2000ರಂದು ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆ 30 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರು (ಶ್ರೀ ಎಂ.ವಿ. ವೆಂಕಟಪ್ಪನವರು) ಪೀಠವನ್ನು ಅಲಂಕರಿಸಿದ್ದರು.

1. ಸಭೆಯ ಮುಂದಿಡಲಾಗುವ ಹಾಗೆ ಪತ್ರಗಳು

ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಸಚಿವರು (ಶ್ರೀ ಎಸ್.ಆರ್. ಕಾಶಪ್ಪನವರ್) :— ಅಧ್ಯಕ್ಷರೇ, ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುತ್ತೇನೆ.

1. ಕರ್ನಾಟಕ ಬಾಡಿಗೆ ವಿಧೇಯಕ, 1999.
2. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ಪತ್ತಿಗಳ ವಿಧೇಯಕ, 1997.

ಅಧ್ಯಕ್ಷರು :— ಸಭೆಯ ಮುಂದಿಡಲಾದ ಹಾಗೆ ಪತ್ರಗಳನ್ನು ಮಂಡಿಸಲಾಯಿತು.

2. ಶಾಸನ ರಚನೆ

ಎ) ವಿಧೇಯಕವನ್ನು ಮಂಡಿಸುವುದು

(1) ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗ (ತಿದ್ದುಪಡಿ) ವಿಧೇಯಕ, 2000.

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :— ಮಾನ್ಯ ಅಧ್ಯಕ್ಷರೆ, 2000ನೇ ಸಾಲಿನ ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ,2000ನೇ ಸಾಲಿನ ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್.ಆರ್. ಕಾಶಪ್ಪನವರ್ :— ಮಾನ್ಯ ಅಧ್ಯಕ್ಷರೆ, 2000 ಸಾಲಿನ ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.